ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : *133(281)*

ಸದಸ್ಯರ ಹೆಸರು : ***ಡಾ: ಚಂದ್ರಶೇಖರ್ ಬಿ ಪಾಟೀಲ್ (ಪದವೀಧರರ ಕ್ಷೇತ್ರ)***

ಉತ್ತರಿಸುವ ದಿನಾಂಕ : 21.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಸರ್ಕಾರಿ ಪದವಿ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ 6 ತಿಂಗಳಿಂದ ಸಂಬಳವನ್ನು ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸಂಬಳವನ್ನು ನೀಡಲಾಗುವುದು?	2019-20ನೇ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಒಟ್ಟು 14228 ಅತಿಥಿ ಉಪನ್ಯಾಸಕರು ಕಾರ್ಯ ನಿರ್ವಹಿಸಿರುತ್ತಾರೆ. ಸದರಿ ಸಾಲಿನಲ್ಲಿ ಜುಲೈ-2019ರಿಂದ 23.03.2020ರ ವರೆಗೆ ಅಂದರೆ ಲಾಕ್‌ಡೌನ್ ಪ್ರಾರಂಭವಾದ ದಿನಾಂಕ:24.03.2020ರ ನಿಕಟ ಪೂರ್ವ ದಿನಾಂಕದವರೆಗೆ ಸಂಭಾವನೆಯನ್ನು ಪಾವತಿಸಲಾಗಿರುತ್ತದೆ. ತದನಂತರ 2019-20ನೇ ಶೈಕ್ಷಣಿಕ ಸಾಲಿನಲ್ಲಿ ಬಾಕಿ ಉಳಿದಿರುವ ಪಠ್ಯ ಕ್ರಮವನ್ನು ಆನ್‌ಲೈನ್ ಮುಖಾಂತರ ಬೋಧನೆಯನು ಮಾಡಲು ಸೂಚಿಸಿರುವಂತೆ ಪೂರ್ಣಕಾಲಿಕ ಬೋಧಕರುಗಳು ಕ್ರಮವಹಿಸಿದ್ದು, ಅದರಂತೆ ಅತಿಥಿ ಉಪನ್ಯಾಸಕರುಗಳಿಗೆ 2019-20ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿಗೆ ಸಂಭಾವನೆಯನ್ನು ಪಾವತಿಸಲಾಗಿದ್ದು, ಸದರಿ ಸಾಲಿನಲ್ಲಿ ಯಾವುದೇ ಬಾಕಿ ಉಳಿದಿರುವುದಿಲ್ಲ. 2020-21ನೇ ಸಾಲಿನಲ್ಲಿ ಶೈಕ್ಷಣಿಕ ಸಾಲಿನಲ್ಲಿ ತರಗತಿಗಳು ಇನ್ನೂ ಪ್ರಾರಂಭವಾಗಿರುವುದಿಲ್ಲವಾದ್ದರಿಂದ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡಿಲ್ಲದಿರುವುದರಿಂದ ಪ್ರಸ್ತುತ ಸಾಲಿನಲ್ಲಿ ಯಾವುದೇ ಬಾಕಿ ಇರುವುದಿಲ್ಲ.

ಕಡತ ಸಂಖ್ಯೆ: ಇಡಿ 138 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು